ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ
ದಿನಾಂಕ : DATE : 1/10/2020

ಪ್ರಜಾವಾಣಿ

ರಾಜಕೀಯ ಪಕ್ಷಗಳ ಮುಖಂಡರ ಜೊತೆ ಜಿಲ್ಲಾ ಚುನಾವಣಾಧಿಕಾರಿ ಸಭೆ

# ಆನ್‌ಲೈನ್‌ನಲ್ಲಿ ನಾಮಪತ್ರ ಸಲ್ಲಿಕೆ

ಪ್ರಜಾವಾಣಿ ವಾರ್ತೆ 1-10-2020

ಬೆಂಗಳೂರು: 'ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಅಭ್ಯರ್ಥಿಗಳು ನಾಮಪತ್ರ, ಪ್ರಮಾಣಪತ್ರಗಳನ್ನು ಆನ್‌ಲೈನ್ ಮೂಲಕವೇ ಸಲ್ಲಿಸುವುದಕ್ಕೆ ಹಾಗೂ ಠೇವಣಿ ಮೊತ್ತವನ್ನು ಡಿಜಿಟಲ್ ಪಾವತಿಗೆ ಅವಕಾಶ ಕಲ್ಪಿಸಲಾಗುತ್ತದೆ' ಎಂದು ಬೆಂಗಳೂರು ನಗರ ಜಿಲ್ಲಾ ಚುನಾವಣಾಧಿಕಾರಿ ಎನ್. ಮಂಜುನಾಥ ಪ್ರಸಾದ್ ತಿಳಿಸಿದರು.

ಉಪಚುನಾವಣೆಗೆ ಸಂಬಂಧ ಎನ್. ಮಂಜುನಾಥ ಪ್ರಸಾದ್ ಅವರು ವಿವಿಧ ರಾಜಕೀಯ ಪಕ್ಷಗಳ ಮುಖಂಡರ ಜೊತೆ ಬುಧವಾರ ಸಭೆ ನಡೆಸಿದರು. 'ಆನ್‌ಲೈನ್ ಮೂಲಕ ನಾಮಪತ್ರ ಸಲ್ಲಿಸಿರುವವರು ನಾಮಪತ್ರ, ಪ್ರಮಾಣಪತ್ರ ಹಾಗೂ ಠೇವಣಿ ಪಾವತಿಸಿದ ದಾಖಲೆಗಳ ಪ್ರತಿಯನ್ನು ನಂತರ ಚುನಾವಣಾಧಿಕಾರಿಗೆ ತಲುಪಿಸಬೇಕು' ಎಂದು ಅವರು ಹೇಳಿದರು.

'ಆರ್.ಆರ್.ನಗರ ವಲಯದ ಜಂಟಿ ಆಯುಕ್ತರ ಕಚೇರಿಯಲ್ಲಿ ಅ.9 ರಿಂದ 16ರವರೆಗೆ ನಾಮಪತ್ರ ಸ್ವೀಕರಿಸಲಿದ್ದೇವೆ. ನಾಮಪತ್ರ ಸಲ್ಲಿಕೆ ವೇಳೆ ಕಚೇರಿಯ 100 ಮೀ.ವ್ಯಾಪ್ತಿಯಲ್ಲಿ ಅಭ್ಯರ್ಥಿಗೆ ಸಂಬಂಧಿಸಿದ ಎರಡು ವಾಹನಗಳಿಗೆ ಮಾತ್ರ ಪ್ರವೇಶಾವಕಾಶ ಅವಕಾಶ ನೀಡಲಾಗುತ್ತದೆ. ಈ ಬಗ್ಗೆ ಕಣ್ಗಾವಲು ಇಡಲು ಕಚೇರಿಯ ಬಳಿ ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಅಳವಡಿಸಲಾಗುತ್ತದೆ' ಎಂದು ವಿವರಿಸಿದರು.



ಸಭೆಯಲ್ಲಿ ಎನ್.ಮಂಜುನಾಥ ಪ್ರಸಾದ್ ಮಾತನಾಡಿದರು

ಪ್ರಜಾ ಮತ ರಾಜರಾಜೇಶ್ವರಿ ನಗರ ಕ್ಷೇತ್ರ
ಜನತಂತ್ರದ ಹಬ್ಬ 2020

ಸಾರ್ವಜನಿಕ ಸಭೆ, ಪ್ರಚಾರ ಕಾರ್ಯಗಳಿಗೆ ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಮನೆ-ಮನೆಗೆ ಹೋಗಿ ಚುನಾವಣಾ ಪ್ರಚಾರ ನಡೆಸುವಾಗ ಐದಕ್ಕಿಂತ ಹೆಚ್ಚು ಮಂದಿ ಕಾರ್ಯಕರ್ತರು ಒಟ್ಟಿಗೆ ಇರುವಂತಿಲ್ಲ. ರೋಡ್ ಶೋನಲ್ಲಿ 5 ವಾಹನಗಳಿಗೆ ಮಾತ್ರ ಅವಕಾಶವಿದ್ದು, ನಿಯಮ ಉಲ್ಲಂಘಿಸಿದವರ ವಿರುದ್ಧ ಪ್ರಕರಣ ದಾಖಲಿಸಲಾಗುತ್ತದೆ ಎಂದು ತಿಳಿಸಿದರು.

'ವಿವಿ.ಪ್ಯಾಟ್ ಹಾಗೂ ವಿದ್ಯುನ್ಮಾನ ಮತಯಂತ್ರಗಳು ಸಿದ್ಧ ಇವೆ. ಅವುಗಳನ್ನು ಮೂರು ಹಂತಗಳಲ್ಲಿ ಪರಿಶೀಲನೆ ನಡೆಸಲಾಗುವುದು. ಅಭ್ಯರ್ಥಿಗಳ ಪ್ರತಿನಿಧಿಗಳೂ ಅವುಗಳನ್ನು ನೋಡಬಹುದು. ಕೋವಿಡ್ ವ್ಯಾಪಕವಾಗಿರುವುದರಿಂದ ಸಕಲ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಚುನಾವಣೆ ಪಾರದರ್ಶಕವಾಗಿ ನಡೆಯುವಂತೆ ನೋಡಿಕೊಳ್ಳಲು ಆಯೋಗವು ವೀಕ್ಷಕರನ್ನು ಶೀಘ್ರವೇ ಕಳುಹಿಸಲಿದೆ' ಎಂದು ತಿಳಿಸಿದರು.

ವಿಶೇಷ ಆಯುಕ್ತ (ಆಡಳಿತ) ಜೆ.ಮಂಜುನಾಥ್ ಉಪಸ್ಥಿತರಿದ್ದರು.

## 'ಮತದಾರರ ಚೀಟಿ ಸಂಗ್ರಹಿಸಿಟ್ಟುಕೊಂಡರೆ ಕೇಸ್'

'ಮತದಾರರ ಭಾವಚಿತ್ರವಿರುವ ಗುರುತಿನ ಚೀಟಿಗಳನ್ನು ಸಂಗ್ರಹಿಸಿಟ್ಟು ಕೊಳ್ಳುವುದಕ್ಕೆ ಅಥವಾ ಬೇರೆಯವರಿಗೆ ಕೊಡುವುದಕ್ಕೆ ಅವಕಾಶ ಇಲ್ಲ. ಈ ಬಗ್ಗೆ ಆಟೊಗಳಲ್ಲಿ ಧ್ವನಿವರ್ಧಕಗಳ ಮೂಲಕ ಜಾಗೃತಿ ಮೂಡಿಸಲಿದ್ದೇವೆ. ಇದ್ಯಾಗಿಯೂ ಮತದಾರರ ಗುರುತಿನ ಚೀಟಿ ಸಂಗ್ರಹಿಸಿಟ್ಟುಕೊಳ್ಳುವುದು ಕಂಡುಬಂದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಲಾಗುವುದು. ಯಾವುದೇ ರೀತಿಯ ಅಹಿತಕರ ಘಟನೆಗಳಿಗೂ ಆಸ್ಪದ ನೀಡಬಾರದು' ಎಂದು ಜಿಲ್ಲಾ ಚುನಾವಣಾಧಿಕಾರಿ ಎಚ್ಚರಿಸಿದರು.

2018ರ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಕ್ಷೇತ್ರದ ಫ್ಲ್ಯಾಟ್ ಒಂದರಲ್ಲಿ ಭಾರಿ ಪ್ರಮಾಣದಲ್ಲಿ ಮತದಾರರ ಗುರುತಿನ ಚೀಟಿ ಸಂಗ್ರಹಿಸಿಟ್ಟುಕೊಂಡಿದ್ದು ಪತ್ತೆಯಾಗಿತ್ತು. ಈ ಕಾರಣಕ್ಕೆ ಚುನಾವಣೆಯನ್ನು ಮುಂದೂಡಲಾಗಿತ್ತು.

## 'ನೀತಿಸಂಹಿತೆ ಉಲ್ಲಂಘಿಸಿದರೆ ಕಟ್ಟುನಿಟ್ಟಿನ ಕ್ರಮ'

'ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಕುರಿತು ಆಧಾರಗಳ ಸಮೇತ ದೂರು ನೀಡಿದಲ್ಲಿ ಅಂತಹವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತೇವೆ. ಕ್ರಿಮಿನಲ್ ಮೊಕದ್ದಮೆಯನ್ನೂ ದಾಖಲಿಸಲಿದ್ದೇವೆ' ಎಂದು ಮಂಜುನಾಥ ಪ್ರಸಾದ್ ಸ್ಪಷ್ಟಪಡಿಸಿದರು.

ಕೇಂದ್ರ ಚುನಾವಣಾ ಆಯೋಗ ಉಪ-ಚುನಾವಣೆಯನ್ನು ಘೋಷಣೆ ಮಾಡಿದ ಕ್ಷಣದಿಂದಲೇ ಈ ಕ್ಷೇತ್ರದಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಾಗಿದೆ.